



ಅರುಣ ಪಿ. ಭಟ್ಟ

## ವಾರಭವಿಷ್ಯ: 07.05.2026ರಿಂದ 13.05.2026ರವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಬಹಳ ಕಾಲದ ನಂತರ ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ಶುಭದಿನ: 08. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಖರ್ಚನ್ನು ಕಡಿಮೆ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗೂ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ: 10. ಹನುಮಾನ್ ಚಾಲೀಸ್ ಪಠಿಸಿರಿ.




ವ್ಯಾಪಾರ, ವ್ಯವಹಾರ ಅಥವಾ ಉದ್ಯಮ ಮಾಡುತ್ತಿರುವವರಿಗೆ ಅತ್ಯುತ್ತಮವಾದ ಸಮಯ ಇದು. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಜತೆಗೆ ನಿಮ್ಮ ಉತ್ಸಾಹ ಸಹ ಹೆಚ್ಚಾಗಲಿದೆ. ಶುಭದಿನ: 09. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಶೈಕ್ಷಣಿಕ ವಲಯದಲ್ಲಿ ಇರುವವರು, ವಿದ್ಯಾರ್ಥಿಗಳಿಗೆ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಮುಂಬರುವ ದಿನಗಳಲ್ಲಿ ಹಲವು ಸಕಾರಾತ್ಮಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಶುಭದಿನ: 10. ಶಿವಕವಚ ಪಠಣ ಮಾಡಿರಿ.




ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆಯಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಉನ್ನತ ಶಿಕ್ಷಣದಲ್ಲಿ ಪ್ರಗತಿ ಕಾಣುತ್ತೀರಿ. ಬೆಳವಣಿಗೆ ಚೆನ್ನಾಗಿ ಇರಲಿದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಶುಭದಿನ: 11. ಲಿಂಗಾಷ್ಟಕ ಪಠಿಸಿರಿ.




ವ್ಯಾಪಾರದಲ್ಲಿ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಪ್ರಯತ್ನ ಪಡುತ್ತಾರೆ. ನೀವು ಈ ಬಗ್ಗೆ ಬಹಳ ಎಚ್ಚರಿಕೆಯಿಂದ ಇರಬೇಕು. ಶುಭದಿನ: 11. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಮನೆಗೆ ದುಬಾರಿ ಪೀಠೋಪಕರಣ ಖರೀದಿ ಮಾಡುವ ಸಂಭವವಿದೆ. ಶುಭದಿನ: 08. ಸೌಂದರ್ಯ ಲಹರಿ ಪಠಿಸಿರಿ.




ಗೌರವದ ಸ್ಥಾನಮಾನ ದೊರೆಯಲಿದೆ. ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಆದಾಯ ಮೂಲಗಳು ಹೆಚ್ಚುವ ಸಾಧ್ಯತೆ ಇದೆ. ನಿಮಗೆ ವಹಿಸಿದ ಕೆಲಸಗಳನ್ನು ಪೂರ್ಣಗೊಳಿಸಬೇಕಾದ ಒತ್ತಡ ಹೆಚ್ಚಾಗುತ್ತದೆ. ನಿಮ್ಮ ಖರ್ಚು ನಿಯಂತ್ರಿಸಬೇಕಾದ ಅನಿವಾರ್ಯ ಎದುರಾಗುತ್ತದೆ. ವ್ಯಾಪಾರಸ್ಥರ ಬೆಳವಣಿಗೆಗೆ ಅವಕಾಶ ದೊರೆಯುತ್ತದೆ. ಶುಭದಿನ: 12. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ದಂಪತಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಪೋಷಕರ ಅಗತ್ಯಗಳನ್ನು ಅರಿತು ಅವುಗಳನ್ನು ಪೂರೈಸಲು ಹೆಚ್ಚು ಪ್ರಯತ್ನ ಪಡುತ್ತೀರಿ. ವಾರದ ಮಧ್ಯ ಭಾಗದಲ್ಲಿ ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ: 10. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಬುದ್ಧಿಶಕ್ತಿ ಹೆಚ್ಚಿಸಿಕೊಳ್ಳಲು ಉತ್ತಮ ಅವಕಾಶ ದೊರೆಯಲಿದೆ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ. ಉದ್ಯೋಗಸ್ಥರಿಗೆ ವಾರದ ಮಧ್ಯ ಭಾಗದಲ್ಲಿ ಬಡ್ತಿ ದೊರೆಯುವ ಅವಕಾಶಗಳಿವೆ. ನಿಮ್ಮ ಜವಾಬ್ದಾರಿ ಹಾಗೂ ಹಕ್ಕು ವಿಸ್ತರಣೆಗೆ ಅವಕಾಶ ಇದೆ. ನಿಮ್ಮ ಕೌಶಲವನ್ನು ಹೆಚ್ಚಿಸಿಕೊಳ್ಳಲು ಶ್ರಮ ಹಾಕಿ. ಶುಭದಿನ: 09. ವಿಷ್ಣು ಸಹಸ್ರನಾಮ ಪಠಿಸಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರಗಳಿಗಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸದಲ್ಲಿ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ಶುಭದಿನ: 12. ಗಣೇಶ ಪಂಚರತ್ನ ಸ್ತೋತ್ರ ಪಠಿಸಿರಿ.




ಉದ್ಯಮದ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ನಿಮ್ಮ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಸುತ್ತಾಟದಿಂದ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಳ್ಳುತ್ತದೆ. ಅದಕ್ಕಾಗಿ ಅನಿವಾರ್ಯವಾಗಿ ಚಿಕಿತ್ಸೆ ಪಡೆಯಬೇಕಾಗುತ್ತದೆ. ಉನ್ನತ ಶಿಕ್ಷಣದಲ್ಲಿ ಯಶಸ್ಸು. ಶುಭದಿನ: 11. ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.